# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1224 (1324) |
| ಸದಸ್ಯರ ಹೆಸರು | ಶ್ರೀ ಪಿ. ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16.03.2026 |
| ಉತ್ತರಿಸುವವರು | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಳಿವಿನಂಚಿನಲ್ಲಿರುವ ಚಿಂಕಾರ ಪ್ರಭೇದ ಪ್ರಾಣಿಗಳನ್ನು ರಕ್ಷಿಸಲು ಸರ್ಕಾರವು 2015ರಲ್ಲಿ ಎಡಹಳ್ಳಿ ಚಿಂಕಾರ ರಕ್ಷಿತಾರಣ್ಯ ಎಂದು ಘೋಷಣೆ ಮಾಡಿ ಚಿಂಕಾರ ಪ್ರಾಣಿಗಳನ್ನು ಸಂರಕ್ಷಿಸಲು ಕ್ರಮವು ಸರಿಯಾಗಿದ್ದು, ಸದರಿ ಅರಣ್ಯ ಪ್ರದೇಶವು ಬೀಳಗಿ ಹಾಗೂ ಮುಧೋಳ ತಾಲ್ಲೂಕಿನ ವ್ಯಾಪ್ತಿಯನ್ನು ಒಳಗೊಂಡಿದ್ದು ಪ್ರಾಣಿ ಸಂರಕ್ಷಣೆಯೊಂದಿಗೆ ಸಾರ್ವಜನಿಕರ ಸಮಸ್ಯೆಗಳಿಗೂ ಧ್ವನಿ ಆಗುವಂತೆ ಸರ್ಕಾರ ಮಾರ್ಗಸೂಚನೆ ಹೊರಡಿಸಿದ್ದರೂ ಅಧಿಕಾರಿಗಳ ನಿರ್ಲಕ್ಷತೆಯಿಂದ ರಕ್ಷಿತಾರಣ್ಯದ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಮತ್ತು ರೈತರಿಗೂ ಉಂಟಾಗುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; | ಹೌದು. ಬಾಗಲಕೋಟೆ ವಿಭಾಗದಲ್ಲಿ ಬರುವ ಎಡಹಳ್ಳಿ ಚಿಂಕಾರ ವನ್ಯಜೀವಿ ಧಾಮದ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರಿಗೂ ಮತ್ತು ರೈತರಿಗೂ ಚಿಂಕಾರಗಳಿಂದ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದರೆ, ಪ್ರಾಣಿಗಳ ರಕ್ಷಣೆಯೊಂದಿಗೆ ರೈತರು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರವಾಗಿ ಮಾಹಿತಿಯನ್ನು ತಿಳಿಸುವುದು) | ಚಿಂಕಾರ ವನ್ಯಜೀವಿಧಾಮ ಎಂದು ಘೋಷಣೆ ಮಾಡಿದ ನಂತರ ಕಾಡುಪ್ರಾಣಿಗಳಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ಸಮಸ್ಯೆಗಳನ್ನು ಅರಿತು ಈ ಕೆಳಕಂಡ ಕ್ರಮಗಳನ್ನು ವನ್ಯಜೀವಿಧಾಮದ ಗ್ರಾಮಗಳ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿದೆ.<br>• ರೈತರ ಜಮೀನುಗಳಲ್ಲಿ ಕಾಡು ಪ್ರಾಣಿಗಳಿಂದ ಬೆಳೆನಷ್ಟ ಉಂಟಾದಾಗ ರೈತರಿಂದ ಅರ್ಜಿಗಳನ್ನು ಸ್ವೀಕರಿಸಿ ಇ-ಪರಿಹಾರ ತಂತ್ರಾಂಶದ ಮೂಲಕ ಸರ್ಕಾರದ ನಿಯಮಾವಳಿಗಳ ಪ್ರಕಾರ ಪರಿಹಾರವನ್ನು ಒದಗಿಸಲಾಗಿದೆ.<br>• ಅರಣ್ಯ ಪ್ರದೇಶ ಹಾಗೂ ರೈತರ ಜಮೀನುಗಳ ಗಡಿವರೆಗೆ ಮುಳ್ಳುತಂತಿ ಬೇಲಿಯನ್ನು ಅಳವಡಿಸಲಾಗಿದೆ.<br>• ಗ್ರಾಮಸ್ಥರಲ್ಲಿ ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಕಾಲಕಾಲಕ್ಕೆ ಹಮ್ಮಿಕೊಳ್ಳಲಾಗುತ್ತಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | • ವನ್ಯಜೀವಿಧಾಮದಲ್ಲಿ ಕಳ್ಳಬೇಟೆ ತಡೆ ಶಿಬಿರಗಳನ್ನು ಸ್ಥಾಪಿಸಿ, ಸದರಿ ಶಿಬಿರಗಳಿಗೆ ಇಲಾಖಾ ಸಿಬ್ಬಂದಿ ಹಾಗೂ ಹೊರಗುತ್ತಿಗೆ ನೌಕರರನ್ನು ನಿಯೋಜಿಸಿ ಅವರುಗಳ ಮುಖಾಂತರ ಹಗಲು ಹಾಗೂ ರಾತ್ರಿ ಗಸ್ತು ಸಂಚಾರ ಕೈಗೊಳ್ಳಲಾಗುತ್ತಿದೆ. |

**ಇ-ಸಂಖ್ಯೆ: ಅಪಜೀ 83 ಎಫ್‌ಡಬ್ಲ್ಯೂಎಲ್ 2026**

(ಈಶ್ವರ ಬಿ. ಖಂಡ್ರೆ)
ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು